ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ
ದಿನಾಂಕ : DATE : 28/5/2020

ಇಂದು ಆಡಳಿತ- ಪ್ರತಿಪಕ್ಷದ ಹಿರಿಯ ಸಂಸದೀಯ ನಾಯಕರ ಜತೆ ಸಭೆ: ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ

# ಪಕ್ಷಾಂತರ ನಿಷೇಧ ಕಾಯಿದೆಯನ್ನು ಬಲಗೊಳಿಸುವ ನಿಟ್ಟಿನಲ್ಲಿ ಆಡಳಿತ

28-5-2020

ವಿಶ್ವವಾಣಿ ಸುದ್ದಿಮನೆ ಬೆಂಗಳೂರು

ಪಕ್ಷಾಂತರ ನಿಷೇಧ ಕಾಯಿದೆ ಬಲಗೊಳಿಸುವ ನಿಟ್ಟಿನಲ್ಲಿ ವಿಧಾನಸೌಧದಲ್ಲಿ ಆಡಳಿತ- ಪ್ರತಿಪಕ್ಷದ ಹಿರಿಯ ಸಂಸದೀಯ ನಾಯಕರ ಸಭೆ ನಡೆಸುತ್ತಿದ್ದೇನೆ ಎಂದು ವಿಧಾನಸಭೆ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅಭಿಪ್ರಾಯ ಪಟ್ಟಿದ್ದಾರೆ.

ವಿಧಾನಸೌಧದ ತಮ್ಮ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ನಾನು ಆಡಳಿತ-ಪ್ರತಿಪಕ್ಷದ ಹಿರಿಯ ಸಂಸದೀಯ ಗಣ್ಯರ ಜತೆ ವಿಧಾನಸೌಧದ ಕೊಠಡಿ 106 ರಲ್ಲಿ ಸಭೆ ಕರೆದಿದ್ದೇನೆ. ಪಕ್ಷಾಂತರ ನಿಷೇಧ ಕಾಯಿದೆ ವಿಚಾರದಲ್ಲಿ ಕೈಗೊಳ್ಳುವ ಕ್ರಮದ ಬಗ್ಗೆ ಸುಧಾರಣೆ ಮಾಡಬೇಕಿದ್ದು ಅದಕ್ಕಾಗಿ ಜೂ.10 ರ ಒಳಗೆ ಅಭಿಪ್ರಾಯ ತಿಳಿಸಲು ತಜ್ಞರಿಂದ ಪ್ರತಿಕ್ರಿಯೆ ಆಹ್ವಾನಿಸಿದ್ದೇನೆ. ಇಂದಿನ ಸಭೆಯಲ್ಲಿ ಕೂಡ ಪಕ್ಷಾಂತರ ನಿಷೇಧ ಕಾಯಿದೆ ಸುಧಾರಣೆ ವಿಚಾರದಲ್ಲಿ ಗಂಭೀರ ಚರ್ಚೆ ನಡೆಸುತ್ತೇನೆ. ಸಿಎಂ ಬಿ.ಎಸ್. ಯಡಿಯೂರಪ್ಪರಿಗೆ ಈ ವಿವರ ಸಲ್ಲಿಸಿದ್ದು, 25 ಹಿರಿಯ ರಾಜಕೀಯ ನಾಯಕರು ಸಭೆಯಲ್ಲಿ ಪಾಲ್ಗೊಳ್ಳುತ್ತಿದ್ದಾರೆ. ಚರ್ಚೆಯ ವಿವರ ಈಗ ನೀಡಲಾಗದು ಎಂದು ಹೇಳುವ ಮೂಲಕ ಮಾಹಿತಿ ಬಹಿರಂಗಪಡಿಸಲು ಹಿಂದೇಟು ಹಾಕಿದರು.

ವಿಧಾನಸಭೆ ಅಧಿವೇಶನ ಮಾರ್ಚ್‌ನಲ್ಲಿ ಕರೋನಾ ಹಿನ್ನೆಲೆ ನಾಲ್ಕು ದಿನ ಮುನ್ನವೇ ಮುಕ್ತಾಯವಾಗಿದೆ. ಅಧಿವೇಶನ ಚೆನ್ನಾಗಿ ನಡೆದಿದೆ. ಕಳೆದ ಎರಡು ತಿಂಗಳ ಅವಧಿಯಲ್ಲಿ ಲಾಕ್‌ಡೌನ್‌ನಿಂದ ತೊಂದರೆ ತೊಪಕಾಗಿದೆ. ಆದರೆ ಜೀವ ಮುಖ್ಯ ಎಂದು ಜನ ಪಾಲಿಸಿದ್ದಾರೆ. ರಾಜ್ಯದಲ್ಲಿ ಲಾಕ್ ಡೌನ್ ಅನುಷ್ಠಾನ ಯಶಸ್ಸಿನಲ್ಲಿ ಜನರ ಪಾತ್ರ ಹೆಚ್ಚಿದೆ. ನಾಡಿಗೆ ಉತ್ತಮ ಸ್ಥಾನ ಸಿಕ್ಕಿದ್ದರೆ ಅದರಲ್ಲಿ ಜನರ ಪಾತ್ರ ಪ್ರಮುಖವಾಗಿದೆ. ಲಾಕ್‌ಡೌನ್‌ನಿಂದಾಗಿ ಜನಜೀವನ ಸಮಸ್ಯೆಗೆ ಒಳಗಾಗಿತ್ತು. ಈಗ ನಿಧಾನವಾಗಿ ಸುಧಾರಿಸುತ್ತಿದೆ. ಕೋವಿಡ್ ರೋಗ ನಮಗೆ ಬರದಂತೆ ತಡೆಯಲು ಅಗತ್ಯವಿರುವ ಸುರಕ್ಷತಾ ಕ್ರಮ ಕೈಗೊಳ್ಳಬೇಕು ಎಂದು ಅವರು ಮನವಿ ಮಾಡಿದರು.

ವಿಧಾನ ಸಭೆಯ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಅವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಈ ಸಭೆಯಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ, ವಿಧಾನ ಸಭೆಯ ಉಪ ಸಭಾಧ್ಯಕ್ಷ ಆನಂದ ಚಂದ್ರಶೇಖರ ಮಾಮನಿ, ಸರಕಾರದ ಮುಖ್ಯ ಸಚೇತಕ ವಿ.ಸುನೀಲ್ ಕುಮಾರ್, ಉಪ ಮುಖ್ಯಮಂತ್ರಿ ಗೋವಿಂದ ಎಂ. ಕಾರಜೋಳ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ.ಮಾಧುಸ್ವಾಮಿ, ವಿರೋಧಪಕ್ಷದ ನಾಯಕ ಸಿದ್ದರಾಮಯ್ಯ, ಜೆಡಿಎಸ್‌ನ ಎಚ್.ಡಿ.ಕುಮಾರಸ್ವಾಮಿ ಮತ್ತಿತರು ಭಾಗವಹಿಸುವರು.

## ಕಠಿಣ ಕ್ರಮ ಕೈಗೊಳ್ಳುವ ಉದ್ದೇಶದಿಂದ ಸಲಹೆ

ಸಂವಿಧಾನದ 1 ನೇ ಅನುಚ್ಛೇದ, ಪಕ್ಷಾಂತರ ನಿಷೇದ ಕಾಯಿದೆ ಕುರಿತು 60 ರ ದಶಕದಿಂದಲೂ ಚರ್ಚೆ ನಡೆಯುತ್ತಿದೆ. ಬಂದಿರುವ ಸರಕಾರಗಳು ಆಯಾ ಕಾಲಕ್ಕೆ ತಕ್ಕಂತೆ ತಮ್ಮದೇ ಆದ ಕ್ರಮ ಕೈಗೊಂಡಿದ್ದಾರೆ. ಜನರ ಆಶಯಕ್ಕೆ ತಕ್ಕಂತೆ ಕಾನೂನು ರೂಪಿತ ಆಗಬೇಕೆಂದು ಹಲವರು ಶ್ರಮಪಟ್ಟು ಪ್ರಾಮಾಣಿಕ ಪ್ರಯತ್ನ ನಡೆಸಿದ್ದಾರೆ. ಆದರೂ ಈ ಪಿಡುಗು ಮುಂದುವರಿದೇ ಇದೆ. ಸಾಕಷ್ಟು ಚರ್ಚೆ ನಡೆದೇ ಇವೆ. ಬೇರೆ ಬೇರೆ ವೇದಿಕೆಯಲ್ಲಿ ಚರ್ಚೆ ಆಗಿದೆ, ನ್ಯಾಯಾಲಯಗಳು ತೀರ್ಪು ನೀಡಿವೆ. ಷಡ್ಯೂಲ್ 10 ಬಲಗೊಳಿಸಲು ಯಾವ ಕ್ರಮ ಕೈಗೊಳ್ಳಬೇಕೆಂದು ಚರ್ಚೆ ನಡೆಯುತ್ತಿದೆ. ಸುಧಾರಣೆಗಾಗಿ ಸಭಾಧ್ಯಕ್ಷರ ಸಮಿತಿ ರಚಿಸಿ ಸಭೆ ನಿರಂತರವಾಗಿ ನಡೆಯುತ್ತಿದೆ. ಉಗಾಂಡ ದೇಶದಲ್ಲಿ ಕೂಡ ಸಭೆಯಲ್ಲಿ ಭಾಗವಹಿಸಿದ್ದೆ. ಡೆಹ್ರಾಡೂನ್, ಅಸ್ಸಾಂ, ದಿಲ್ಲಿ ಮತ್ತಿತರ ಕಡೆ ನಡೆದಾಗ ಭಾಗವಹಿಸಿದ್ದೆ. ಲೋಕಸಭೆ ಸಭಾಧ್ಯಕ್ಷ ಓಂ ಬಿರ್ಲಾ ಮೂವರು ಸಭಾಧ್ಯಕ್ಷರ ಸಮಿತಿ ರಚಿಸಿದ್ದಾರೆ. ರಾಜಸ್ಥಾನದ ಜಯಪುರದಲ್ಲಿ ನಮ್ಮ ಒಂದು ಸಭೆ ಆಗಿದೆ. ಈಗ ಅದಾಗಿ ಕೆಲ ದಿನ ನಡೆದಿದೆ. ಇದೀಗ ಮತ್ತೆ ಪಕ್ಷಾಂತರ ಚಟುವಟಿಕೆ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವ ನಿಟ್ಟಿನಲ್ಲಿ ಸಲಹೆ ಪಡೆಯಲು ಮುಂದಾಗಿದ್ದೇನೆ ಎಂದು ತಿಳಿಸಿದರು.

